ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೦೫**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತೆಂಟನೆಯ ಅಧಿವೇಶನ**

**(ಮುಂದುವರೆದ ಉಪವೇಶನಗಳು)**

**ಸೋಮವಾರ, ದಿನಾಂಕ: ೦೯ನೇ ಮಾರ್ಚ್, ೨೦೨೬**

---

**ಸಮೂಹ – I**

೧. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

೨. ಇಂಧನ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು

೫. ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು

೬. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

೭. ಉನ್ನತ ಶಿಕ್ಷಣ ಸಚಿವರು

---

## ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಯಿಂದ ಪ್ರಾಚಾರ್ಯರ ಹುದ್ದೆಗೆ ಬಡ್ತಿ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) –**

೬೧ (೫೭೫) ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಿಂದ ಪ್ರಾಚಾರ್ಯರ ಹುದ್ದೆಗೆ ಬಡ್ತಿ ನೀಡುವ ಸಲುವಾಗಿ C R ಕರೆದಿದ್ದು, ಮುಂದಿನ ಪ್ರಕ್ರಿಯೆ ಯಾವ ಹಂತದಲ್ಲಿದೆ ;

(ಆ) ರಾಜ್ಯದಲ್ಲಿ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಾಂಶುಪಾಲರ ಹುದ್ದೆ ಖಾಲಿಯಿದ್ದು, ಪರೀಕ್ಷೆ ಮತ್ತು ದಾಖಲಾತಿ ಪ್ರಕ್ರಿಯೆಗೆ ತೊಂದರೆಯಾಗುವುದಿಲ್ಲವೇ ; ಈ ಬಗ್ಗೆ ಸರ್ಕಾರ ಕ್ರಮ ಕೈಗೊಂಡಿದೆಯೇ ;

(ಇ) ಕ್ರಮ ಕೈಗೊಂಡಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ;

(ಈ) ಉಪನ್ಯಾಸಕರಿಂದ ಪ್ರಾಚಾರ್ಯರ ಹುದ್ದೆಗೆ ಪದೋನ್ನತಿ ನೀಡಲು C R ಕರೆದಿದ್ದು, D.P.C ಮಾಡಿ ಪ್ರಾಚಾರ್ಯರ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು ?

## ವಿದ್ಯುತ್ ಪರಿವರ್ತಕಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) –**

೬೨ (೫೫೭) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇಂಧನ ಇಲಾಖೆಯು ೨೦೨೪–೨೫ನೇ ಸಾಲಿನಲ್ಲಿ ಎಷ್ಟು ವಿದ್ಯುತ್ ಪರಿವರ್ತಕ (ಟ್ರಾನ್ಸ್‌ಫಾರ್ಮರ್) ಖರೀದಿಗಾಗಿ ಎಷ್ಟು ಮೊತ್ತ ಹಾಗೂ ಯಾವ ಸಂಸ್ಥೆಯ ಪರವಾಗಿ ೪ಜಿ ವಿನಾಯಿತಿ ಪಡೆಯಲಾಗಿತ್ತು ; ಸದರಿ ವಿದ್ಯುತ್ ಪರಿವರ್ತಕ (ಟ್ರಾನ್ಸ್‌ಫಾರ್ಮರ್) ಗಳನ್ನು ಯಾವಾಗ ಖರೀದಿಸಲಾಗಿದೆ ; (ಮಾಹಿತಿ ನೀಡುವುದು)

(ಆ) ಕವಿಕ (ಕರ್ನಾಟಕ ವಿದ್ಯುತ್ ಕಾರ್ಖಾನೆ ಕರ್ನಾಟಕ ಸರ್ಕಾರದ ಅಧೀನ ಸಂಸ್ಥೆ) ಯಿಂದ ೧೧೭೨೧ ವಿದ್ಯುತ್ ಪರಿವರ್ತಕ (ಟ್ರಾನ್ಸ್‌ಫಾರ್ಮರ್) ಗಳನ್ನು ಖರೀದಿಸದೆ ರೂ. ೧೭೪.೭೩ ಕೋಟಿ ನೀಡಿ ಕೇರಳ ಸರ್ಕಾರದ ಅಧೀನ ಸಂಸ್ಥೆ (ಕೇರಳ ಎಲೆಕ್ಟ್ರಿಕ್ ಮತ್ತು ಎಲೈಡ್ ಕಂ) ಯಿಂದ ಖರೀದಿಸುವ ಸಲುವಾಗಿ ೪ಜಿ ವಿನಾಯಿತಿ ಪಡೆಯಲು ಅನುಸರಿಸಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಕೇರಳ ರಾಜ್ಯದ ಚುನಾವಣಾ ವೆಚ್ಚ ಸರಿದೂಗಿಸುವ ನಿಟ್ಟಿನಲ್ಲಿ ಕೇರಳ ರಾಜ್ಯದ ಸಂಸ್ಥೆಯಿಂದ ಖರೀದಿಸುತ್ತಿರುವುದಾಗಿ ಸಾರ್ವಜನಿಕ ವಲಯದಲ್ಲಿ ಚರ್ಚೆಗಳಾಗುತ್ತಿದ್ದು, ಈ ಕುರಿತು ಸರ್ಕಾರದ ನಿಲುವೇನು ;

(ಈ) ಅನ್ಯ ರಾಜ್ಯದಿಂದ ವಿದ್ಯುತ್ ಪರಿವರ್ತಕ (ಟ್ರಾನ್ಸ್‌ಫಾರ್ಮರ್) ಗಳನ್ನು ಖರೀದಿಸುವುದೇ ಆಗಿದ್ದಲ್ಲಿ, ಈ ಕುರಿತು ಟೆಂಡರ್ ಕರೆಯದಿರಲು ಕಾರಣಗಳೇನು ? (ವಿವರಗಳನ್ನು ಒದಗಿಸುವುದು)

## ಪದವಿ ಪೂರ್ವ ಕಾಲೇಜುಗಳ
## ಹೆಚ್ಚುವರಿ ಉಪನ್ಯಾಸಕರ ವರ್ಗಾವಣೆ ಬಗ್ಗೆ

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) –**

೬೩ (೬೨೪) ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಉಪನ್ಯಾಸಕರ ಹುದ್ದೆಯನ್ನು ಯಾವ ಮಾನದಂಡದ ಆಧಾರದ ಮೇಲೆ ಹೆಚ್ಚುವರಿ ಎಂದು ಪರಿಗಣಿಸಲಾಗಿದೆ ;

(ಆ) ಮಾನದಂಡದಲ್ಲಿ ವಿದ್ಯಾರ್ಥಿಗಳ–ಉಪನ್ಯಾಸಕರ ಅನುಪಾತದ ಪ್ರಮಾಣವನ್ನು ಪರಿಗಣಿಸುವುದಾದರೆ ಈ ಹಿಂದಿನ ಅನುಪಾತವನ್ನು ಪರಿಗಣಿಸಲಾಗುತ್ತಿದೆಯೇ ; ಇಲ್ಲವೆ ಅನುಪಾತವನ್ನು ಬದಲಾವಣೆ ಮಾಡುವ ಆಲೋಚನೆ ಸರ್ಕಾರದ ಮುಂದಿದೆಯೇ ;

(ಇ) ಅನುಪಾತ ಪ್ರಮಾಣವನ್ನು ಪ್ರಾಥಮಿಕ–ಪ್ರೌಢಶಿಕ್ಷಣ ಇಲಾಖೆಯಲ್ಲಿ ಕಡಿಮೆ ಮಾಡಿದಂತೆ ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಕಡಿಮೆ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ?

# ಗ್ರಂಥಾಲಯ ಇಲಾಖೆಯಲ್ಲಿ ಕೈ ರಸೀದಿ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಬಗ್ಗೆ

**ಶ್ರೀ ರಾಮೋಜಿ ಗೌಡ (ಪದವೀಧರರ ಕ್ಷೇತ್ರ) –**

೬೪ (೬೦೫) ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಾರ್ವಜನಿಕ ಗ್ರಂಥಾಲಯ ಇಲಾಖೆ ವ್ಯಾಪ್ತಿಯಡಿ ಎಷ್ಟು ಗ್ರಂಥಾಲಯಗಳನ್ನು ತೆರೆಯಲಾಗಿದೆ ಹಾಗೂ ಪ್ರಸ್ತುತ ಎಷ್ಟು ಗ್ರಂಥಾಲಯಗಳು ಕಾರ್ಯನಿರ್ವಹಿಸುತ್ತಿದೆ ;

(ಆ) ರಾಜ್ಯದಲ್ಲಿ ಗ್ರಂಥಾಲಯ ಇಲಾಖೆ ವ್ಯಾಪ್ತಿಯಡಿ ಕೈ ರಸೀದಿ ಆಧಾರದ ಮೇಲೆ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಗ್ರಂಥಾಲಯಗಳಲ್ಲಿ ಕೈ ರಸೀದಿ ಆಧಾರದ ಮೇಲೆ ಕೆಲಸಗಳನ್ನು ಮಾಡುತ್ತಿರುವ ಸಿಬ್ಬಂದಿಗಳಿಗೆ ನೀಡಲಾಗುತ್ತಿರುವ ವೇತನ ಎಷ್ಟು ; ಹಾಗೂ ನೀಡಲಾಗಿರುವ ಸೌಲಭ್ಯಗಳೇನು ;

(ಈ) ಕೈ ರಸೀದಿ ಆಧಾರದ ನೌಕರರಿಗೆ ಕನಿಷ್ಟ ವೇತನ ನೀಡಬೇಕೆಂದು ಸರ್ಕಾರದ ಆದೇಶವಿದೆಯೇ ; ಇದ್ದಲ್ಲಿ , ಇವರಿಗೆ ಕನಿಷ್ಟ ವೇತನ ನೀಡಲಾಗುತ್ತಿದೆಯೇ ?

# ಜಾಗತಿಕ ಬೆಳವಣಿಗೆಯ ಹಿನ್ನೆಲೆಯಲ್ಲಿ ಉನ್ನತ ಶಿಕ್ಷಣ ಇಲಾಖೆಯ ಕ್ರಮಗಳ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) –**

೬೫ (೬೪೮) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಾಗತಿಕ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಉನ್ನತ ಶಿಕ್ಷಣ ಇಲಾಖೆಯಲ್ಲಿ ಬದಲಾವಣೆಗೆ ಕೈಗೊಂಡಿರುವ ಕ್ರಮಗಳೇನು ; ಇದರಿಂದ ರಾಜ್ಯದ ವಿದ್ಯಾರ್ಥಿಗಳಿಗೆ ಯಾವ ಯಾವ ಪ್ರಯೋಜನಗಳು ದೊರೆಯಲಿದೆ ;

(ಆ) ಜಾಗತಿಕ ಶೈಕ್ಷಣಿಕ ಬೆಳವಣಿಗೆಯ ಅಧ್ಯಯನಕ್ಕೆ ಉನ್ನತ ಶಿಕ್ಷಣ ಇಲಾಖೆಯ ಶೈಕ್ಷಣಿಕ ಪ್ರವಾಸಗಳು ನಡೆದಿರುತ್ತವೆಯೇ ; ನಡೆದಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಇಂತಹ ಪ್ರವಾಸಗಳ ಮತ್ತು ಪ್ರವಾಸದಲ್ಲಿ ಭಾಗಿಯಾದ ಹಾಗೂ ಪ್ರವಾಸದ ವೆಚ್ಚದ ವಿವರಗಳನ್ನು ಒದಗಿಸುವುದು ;

(ಇ) ಉನ್ನತ ಶಿಕ್ಷಣದ ಜಾಗತಿಕ ಬೆಳವಣಿಗೆಯ ಹಿನ್ನೆಲೆಯಲ್ಲಿ ರಾಜ್ಯ ಉನ್ನತ ಶಿಕ್ಷಣ ಇಲಾಖೆಯು ವಿದೇಶದ ಯಾವ ಯಾವ ವಿಶ್ವವಿದ್ಯಾಲಯಗಳ ಜೊತೆ ಶೈಕ್ಷಣಿಕ ವಿಷಯ ಆಧಾರಿತ ಒಪ್ಪಂದಗಳನ್ನು ಮಾಡಿಕೊಂಡಿರುತ್ತದೆ ; ಮಾಡಿಕೊಂಡಿದ್ದಲ್ಲಿ , ಅದರ ವಿವರಗಳನ್ನು ಒದಗಿಸುವುದು ;

(ಈ) ಎ ಐ (ಆರ್ಟಿಫಿಶಿಯಲ್ ಇಂಟಲಿಜೆನ್ಸ್) ಮತ್ತು ಕ್ವಾಂಟಮ್ ಕಂಪ್ಯೂಟರ್ ಶೈಕ್ಷಣಿಕ ಕ್ರಾಂತಿಯ ಅಳವಡಿಕೆ ಉನ್ನತ ಶಿಕ್ಷಣ ಇಲಾಖೆಯಲ್ಲಿ ನಡೆದಿದೆಯೇ ; ನಡೆದಿದ್ದಲ್ಲಿ, ಅದರ ಅಳವಡಿಕೆ ಸಂಬಂಧ ಮತ್ತು ಕೈಗೊಂಡ ಕ್ರಮಗಳ ಕುರಿತು ವಿವರಗಳನ್ನು ಒದಗಿಸುವುದು ;

(ಉ) ರಾಜ್ಯದ ಉನ್ನತ ಶಿಕ್ಷಣದ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಕೌಶಲ್ಯ ಶಿಕ್ಷಣ ಸಂಬಂಧ ಇಲಾಖೆಯು ಕೈಗೊಂಡಿರುವ ಯೋಜನೆಗಳೇನು ; ಅದರ ಅಳವಡಿಕೆ ಸಂಬಂಧ ಆಗಿರುವ ಪ್ರಗತಿಯ ಮಾಹಿತಿಯನ್ನು ಒದಗಿಸುವುದು ;

(ಊ) ಕಳೆದ ಮೂರು ವರ್ಷಗಳಲ್ಲಿ ಜಾಗತಿಕ ಶೈಕ್ಷಣಿಕ ಬೆಳವಣಿಗೆಯ ಸಂಬಂಧ ಉನ್ನತ ಶಿಕ್ಷಣ ಇಲಾಖೆಯ ವಿದೇಶ ಪ್ರವಾಸ ಅಧ್ಯಯನ ಕುರಿತು ಸರ್ಕಾರಕ್ಕೆ ನೀಡಿರುವ ವರದಿಗಳೆಷ್ಟು ; ನೀಡಿದಲ್ಲಿ , ವರದಿಯ ಪ್ರತಿಗಳನ್ನು ಒದಗಿಸುವುದು ?

## ಮೈಸೂರಿನ ಕೆ.ಆರ್. ಆಸ್ಪತ್ರೆಯ ಬಗ್ಗೆ

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) –**

೬೬ (೫೮೧) ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರಿನ ಕೆ.ಆರ್. ಆಸ್ಪತ್ರೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಚಿಕಿತ್ಸಾ ವಿಭಾಗಗಳ ಸಂಖ್ಯೆ ಎಷ್ಟು ; ಸದರಿ ವಿಭಾಗಗಳಲ್ಲಿ ಮಂಜೂರಾದ ತಜ್ಞ ವೈದ್ಯರ ಹುದ್ದೆಗಳೆಷ್ಟು ಹಾಗೂ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ಹಾಗೂ ಹೊರಗುತ್ತಿಗೆ ಆಧಾರಿತ ವೈದ್ಯರುಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಈ ಆಸ್ಪತ್ರೆಯಲ್ಲಿ ಪ್ರಸ್ತುತ ಇರುವ ಒಟ್ಟು ಹಾಸಿಗೆಗಳ ಸಂಖ್ಯೆ ಎಷ್ಟು ; ಪ್ರತಿನಿತ್ಯ ಸರಾಸರಿ ಎಷ್ಟು ಸಂಖ್ಯೆಯ ಹೊರರೋಗಿಗಳು ಮತ್ತು ಒಳರೋಗಿಗಳು ಚಿಕಿತ್ಸೆ ಪಡೆಯುತ್ತಿದ್ದಾರೆ ; ರೋಗಿಗಳ ಸಂಖ್ಯೆಗೆ ಅನುಗುಣವಾಗಿ ವೈದ್ಯರು ಮತ್ತು ಹಾಸಿಗೆಗಳ ಸಂಖ್ಯೆ ಸಾಕಾಗುತ್ತಿದೆಯೇ ;

(ಇ) ಮೈಸೂರು ವೈದ್ಯಕೀಯ ಕಾಲೇಜಿನ (MMC&RI) ಆವರಣದಲ್ಲಿರುವ ಕೆ.ಆರ್. ಮತ್ತು ಚೆಲುವಾಂಬ ಆಸ್ಪತ್ರೆಗಳ ಹಳೆಯ ಕಟ್ಟಡಗಳ ಬದಲಾಗಿ ಸುಸಜ್ಜಿತ ಹೊಸ ಕಟ್ಟಡ ನಿರ್ಮಿಸುವ ಹಾಗೂ ಅತ್ಯಾಧುನಿಕ ಶಸ್ತ್ರಚಿಕಿತ್ಸಾ ಕೊಠಡಿಗಳನ್ನು ಹೆಚ್ಚಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಈ ಯೋಜನೆಗೆ ಮೀಸಲಿಟ್ಟಿರುವ ಅನುದಾನ ಮತ್ತು ಕಾಮಗಾರಿಯ ಪ್ರಸ್ತುತ ಹಂತವೇನು ?

## ಬೆಂಗಳೂರು ನಗರ ಜಿಲ್ಲೆಯ ಸರ್ಕಾರಿ ಶಾಲೆಗಳಲ್ಲಿ ಮೂಲಸೌಕರ್ಯದ ಕೊರತೆಯಿಂದ ಮುಚ್ಚುವ ಪರಿಸ್ಥಿತಿ ತಲುಪಿರುವ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೭ (೬೮೭) ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆಯ ಸರ್ಕಾರಿ ಶಾಲೆಗಳ ಪೈಕಿ ಮೂಲಸೌಕರ್ಯ (ಕಟ್ಟಡ, ಕುಡಿಯುವ ನೀರು, ಶೌಚಾಲಯ, ವಿದ್ಯುತ್ ಇತ್ಯಾದಿಗಳ) ಕೊರತೆಯಿಂದ ಮುಚ್ಚುವ ಪರಿಸ್ಥಿತಿಗೆ ತಲುಪಿರುವ ಶಾಲೆಗಳ ಒಟ್ಟು ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಶಿಕ್ಷಕರ ಕೊರತೆಯಿಂದ ಅಥವಾ ಖಾಲಿ ಹುದ್ದೆಗಳು ತುಂಬದ ಕಾರಣದಿಂದ ಸರಿಯಾದ ಬೋಧನಾ ಕಾರ್ಯ ನಡೆಯದ ಸರ್ಕಾರಿ ಶಾಲೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಈ ಶಾಲೆಗಳು ಮುಚ್ಚುವ ಪರಿಸ್ಥಿತಿ ಬರದಂತೆ ಸರ್ಕಾರ ತೆಗೆದುಕೊಂಡಿರುವ ತುರ್ತು ಕ್ರಮಗಳು ಯಾವುವು ;

(ಈ) ೨೦೨೪–೨೦೨೫ನೇ ಸಾಲಿನಲ್ಲಿ ಮೂಲಸೌಕರ್ಯಗಳ ಕೊರತೆಯಿರುವ ಸರ್ಕಾರಿ ಶಾಲೆಗಳ ಅಭಿವೃದ್ಧಿಗಾಗಿ ಸರ್ಕಾರ ಮೀಸಲಿಟ್ಟಿರುವ ಬಜೆಟ್ ಅನುದಾನ ಎಷ್ಟು ; ಅದರ ಕಾರ್ಯಗತಗೊಳಿಸುವಿಕೆ ಯಾವ ಹಂತದಲ್ಲಿದೆ ?

## ವಿಶ್ವವಿದ್ಯಾಲಯಗಳಲ್ಲಿ ಬೋಧಕರು ಹಾಗೂ ಬೋಧಕೇತರ ಸಾವಿರಾರು ಹುದ್ದೆಗಳು ಖಾಲಿ ಇರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೬೮ (೫೬೮) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿಶ್ವವಿದ್ಯಾಲಯಗಳಲ್ಲಿ ಮೂರು ಸಾವಿರ ಬೋಧಕರು ಆರು ಸಾವಿರ ಬೋಧಕೇತರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು ;

(ಆ) ವಿಶ್ವವಿದ್ಯಾಲಯಗಳಲ್ಲಿ ಖಾಲಿ ಹುದ್ದೆ ಇರುವುದರಿಂದ ಗುಣಮಟ್ಟದ ಶಿಕ್ಷಣದ ಮೇಲೆ ಹೊಡೆತ ಬೀಳುವುದಿಲ್ಲವೇ ; ಖಾಲಿ ಇರುವಂತ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ;

(ಇ) ರಾಜ್ಯದಲ್ಲಿರುವ ೩೨ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಶೇ. ೭೦ ಹುದ್ದೆಗಳು ಖಾಲಿ ಇದ್ದರೆ, ಕೆಲವು ವಿವಿಗಳಲ್ಲಿ ಶೇ.೧೦೦ ರಷ್ಟು ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹೊಸದಾಗಿ ಆರಂಭವಾದ ವಿಶ್ವವಿದ್ಯಾಲಯಗಳಿಗೆ ಹುದ್ದೆಗಳು ಮಂಜೂರಾಗಿದ್ದು, ಇದುವರೆಗೂ ಸದರಿ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣಗಳೇನು ?

## ಕರ್ನಾಟಕ ಪಬ್ಲಿಕ್ ಶಾಲೆಗಳ ಬಗ್ಗೆ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) –**

೬೯ (೭೧೦) ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಎಷ್ಟು ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ ಪರಿವರ್ತಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ ಪರಿವರ್ತಿಸಲು ಇರುವ ಮಾನದಂಡವೇನು ;

(ಇ) ಇದರಲ್ಲಿ ಎಷ್ಟು ಉರ್ದು ಮಾಧ್ಯಮದ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ ಪರಿವರ್ತಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಶಿವಮೊಗ್ಗ ಜಿಲ್ಲೆಯಲ್ಲಿ ಎಷ್ಟು ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ ಪರಿವರ್ತಿಸಲಾಗಿದೆ ; ಇದರಲ್ಲಿ ಉರ್ದು ಶಾಲೆಗಳು ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಪಬ್ಲಿಕ್ ಶಾಲೆಗಳನ್ನಾಗಿ ಪರಿವರ್ತಿಸುತ್ತಿರುವ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) –**

೭೦ (೬೩೯) ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಸರ್ಕಾರಿ ಪ್ರಾಥಮಿಕ ಶಾಲೆ ಹಾಗೂ ಪ್ರೌಢ ಶಾಲೆಗಳನ್ನು ಒಟ್ಟುಗೂಡಿಸಿ ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ ಪರಿವರ್ತಿಸಲು ಸರ್ಕಾರವು ಅನುಮತಿ ನೀಡಿದೆಯೇ ; ನೀಡಿದ್ದಲ್ಲಿ, ಕಳೆದ ೦೨ ವರ್ಷಗಳಲ್ಲಿ ಎಷ್ಟು ಶಾಲೆಗಳನ್ನು ಪರಿವರ್ತಿಸಲಾಗಿದೆ ; (ಶಾಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿನ ಯಾವ–ಯಾವ ಶಾಲೆಗಳನ್ನು ಯಾವ ಕಾರಣಕ್ಕಾಗಿ ಪರಿವರ್ತಿಸಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ಈ ರೀತಿಯಾದ ಕ್ರಮಗಳಿಂದ ಕನ್ನಡ ಶಾಲೆಗಳ ಮುಚ್ಚುವ ಪ್ರಕ್ರಿಯೆಯನ್ನು ಸರ್ಕಾರವೇ ಪ್ರಾರಂಭಿಸಿದಂತಾಗುವುದಿಲ್ಲವೇ ; (ವಿವರ ನೀಡುವುದು)

(ಈ) ಇಂತಹ ಕ್ರಮಗಳಿಂದಾಗಿ ಕನ್ನಡ ಶಾಲೆಯಲ್ಲಿ ಮಕ್ಕಳ ದಾಖಲಾತಿ ಪ್ರಮಾಣ ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಉ) ಕಳೆದ ೦೩ ವರ್ಷಗಳಲ್ಲಿ ಕನ್ನಡ ಶಾಲೆಯಲ್ಲಿ ಮಕ್ಕಳ ದಾಖಲಾತಿ ಪ್ರಮಾಣವು ಶೇಕಡವಾರು ಎಷ್ಟು ಕಡಿಮೆಯಾಗಿದೆ ; ಕಡಿಮೆಯಾಗಲು ಕಾರಣವೇನು ; ಹಾಗೂ ಈ ಬಗ್ಗೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ಬೇಸಿಗೆಯಲ್ಲಿ ವಿದ್ಯುತ್ ಸಮಸ್ಯೆ ಕುರಿತು

**ಶ್ರೀ ಟಿ.ಎನ್. ಜವರಾಯಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೭೧ (೫೬೨) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೇಸಿಗೆಯಲ್ಲಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾಗದಂತೆ ನಿರಂತರ ವಿದ್ಯುತ್ ಸರಬರಾಜಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ರಾಜ್ಯದಲ್ಲಿರುವ ಟಿ.ಸಿ.ಗಳ ಸಂಖ್ಯೆ ಎಷ್ಟು ; ಟಿ.ಸಿ.ಗಳ ಅಳವಡಿಕೆ ನಿರ್ವಹಣೆಗೆ ಹಾಗೂ ದುರಸ್ತಿಗಾಗಿ ಸರ್ಕಾರ ಯಾವ ರೀತಿಯ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ವಿದ್ಯುತ್ ಸಮಸ್ಯೆ ಆಗದಂತೆ ವಿದ್ಯುತ್ ಜಾಲ ನಿರ್ವಹಣೆ ವಿದ್ಯುತ್ ಲೈನ್‌ಗಳ ಮೇಲ್ದರ್ಜೆ ಮತ್ತು ಪರಿವರ್ತಕಗಳ (ಟಿ.ಸಿ.) ನಿರ್ವಹಣೆ ಆಗಬೇಕಾಗಿರುವುದರಿಂದ ಈ ಬಗ್ಗೆ ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಈಗಾಗಲೇ ಬೇಸಿಗೆಯಲ್ಲಿ ಗ್ರಾಮೀಣ ಪ್ರದೇಶದಲ್ಲಿ ವಿದ್ಯುತ್ ಸಮಸ್ಯೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗೂ ವಿದ್ಯುತ್ ಉತ್ಪಾದನೆ ಮತ್ತು ವಿತರಣೆಯಲ್ಲಿ ವ್ಯತ್ಯಾಸ ಉಂಟಾಗಿದೆಯೇ ; ಹಾಗಿದ್ದಲ್ಲಿ , ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಮಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯ ಕುಡುಪು ಪ್ರದೇಶದಲ್ಲಿ ಸಬ್‌ಸ್ಟೇಷನ್ ಸ್ಥಾಪನೆ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) –**

೭೨ (೫೬೭) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ತಾಲ್ಲೂಕಿನ ಮಹಾನಗರಪಾಲಿಕೆ ವ್ಯಾಪ್ತಿಯ ಕುಡುಪು ಪ್ರದೇಶದಲ್ಲಿ ೧೧೦ ಕೆ.ವಿ. ಸಾಮರ್ಥ್ಯದ ಸಬ್‌ಸ್ಟೇಷನ್ ನ್ನು ೨೦೧೮ರಲ್ಲಿ ನಿರ್ಮಿಸಬೇಕೆಂದು ತೀರ್ಮಾನಿಸಲಾಗಿದ್ದು, ರೈತರು ಅನೇಕ ಹೋರಾಟ ನಡೆಸಿದರೂ ಇನ್ನು ಉಪಕೇಂದ್ರ ಕಾಮಗಾರಿ ಸ್ಥಾಪನೆಯಾಗದೆ ರೈತರಿಗೆ ತೊಂದರೆಗಳಾಗಿದ್ದು ಸರ್ಕಾರ ಈವರೆಗೂ ಕ್ರಮ ಕೈಗೊಳ್ಳದೇ ಇರಲು ಕಾರಣವೇನು ;

(ಆ) ರೈತರಿಗೆ ಮತ್ತು ಕೈಗಾರಿಕೆಗಳಿಗೆ ಗುಣಮಟ್ಟದ ವಿದ್ಯುತ್ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ೨೪ ಗಂಟೆಗಳ ಕಾಲ ಗುಣಮಟ್ಟದ ವಿದ್ಯುತ್ ನೀಡದೇ ಸುಮಾರು ೭ ಗ್ರಾಮಗಳಾದ ಅಡ್ಯಾರು, ಪಣಂಬೂರು, ಉಳಾಯಿಬೆಟ್ಟು, ಗುರುಪುರ, ಕುಡುಪು ತಿರುವೈಲು ಪ್ರದೇಶದ ರೈತರ ಬೇಡಿಕೆ ಪೂರೈಸಲು ಸರ್ಕಾರ ಕೈಗೊಂಡ ಕ್ರಮವೇನು ; ಈ ರೀತಿಯ ಎಷ್ಟು ಪ್ರಕರಣಗಳು ರಾಜ್ಯಾದ್ಯಂತ ಬಾಕಿ ಇವೆ ;

(ಈ) ಮೆಸ್ಕಾಂ ಮಂಗಳೂರು ವ್ಯಾಪ್ತಿಯಲ್ಲಿ ವಿದ್ಯುತ್ ಕೊರತೆ ಇರುವ ಬಗ್ಗೆ ಸಾರ್ವಜನಿಕರ ದೂರು ಇದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಭ್ರೂಣ ಹತ್ಯೆ ಪ್ರಕರಣಗಳು ದಾಖಲಾಗಿರುವ ಬಗ್ಗೆ

**ಡಾ: ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) –**

೭೩ (೫೯೧) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಭ್ರೂಣ ಹತ್ಯೆ ಪ್ರಕರಣಗಳು ದಾಖಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಎಷ್ಟು ಪ್ರಕರಣಗಳು ದಾಖಲಾಗಿದೆ ; ಈ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಈ ರೀತಿ ಪ್ರಕರಣಗಳಲ್ಲಿ ಭಾಗಿಯಾಗಿರುವ ವೈದ್ಯರ ಮೇಲೆ ಸರ್ಕಾರದಿಂದ FIR ದಾಖಲಿಸಲಾಗಿದೆಯೇ ; ದಾಖಲಿಸಿದ್ದಲ್ಲಿ , ಇದುವರೆಗೂ ಎಷ್ಟು FIR ನ್ನು ದಾಖಲಿಸಲಾಗಿದೆ ; ರಾಜ್ಯದಲ್ಲಿ ಭ್ರೂಣ ಹತ್ಯೆಯ ಬಗ್ಗೆ ಮಾಹಿತಿ ಕೊಟ್ಟವರಿಗೆ ಸರ್ಕಾರದಿಂದ ಎಷ್ಟು ಬಹುಮಾನ ನೀಡಲಾಗುತ್ತಿದೆ ;

(ಈ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಜನರಿಗೆ ಈ ರೀತಿ ಬಹುಮಾನ ನೀಡಲಾಗಿದೆ ?

## ರಾಜ್ಯದ ಔಷಧ ಉಗ್ರಾಣಗಳಲ್ಲಿ ಔಷಧಗಳ ಕೊರತೆಯಿಂದ ಆಗುತ್ತಿರುವ ತೊಂದರೆ ಕುರಿತು

**ಡಾ: ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) –**

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) –**

೭೪ (೫೭೮+೬೨೯) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ಔಷಧ ಉಗ್ರಾಣ (ವೇರ್‌ಹೌಸ್) ಗಳಲ್ಲಿ ಅಗತ್ಯ ಜೀವರಕ್ಷಕ ಔಷಧಗಳ ಕೊರತೆಯಿಂದಾಗಿ ಸರ್ಕಾರಿ ಆಸ್ಪತ್ರೆಗಳಿಗೆ ನಿಯಮಿತ ಪೂರೈಕೆಯಿಲ್ಲದೆ ರೋಗಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯ ಔಷಧ ಉಗ್ರಾಣ ಮತ್ತು ಜಿಲ್ಲಾ ಔಷಧ ಉಗ್ರಾಣಗಳಲ್ಲಿ ಕಡ್ಡಾಯವಾಗಿ ಇರಬೇಕಾದ ಒಟ್ಟು ಔಷಧಿಗಳ ಮಾದರಿ ಮತ್ತು ಅವುಗಳ ಪ್ರಮಾಣವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ರಾಜ್ಯ ಔಷಧ ಉಗ್ರಾಣ ಮತ್ತು ಜಿಲ್ಲಾ ಔಷಧ ಉಗ್ರಾಣಗಳಲ್ಲಿರುವ ಒಟ್ಟು ಔಷಧಿಗಳ ಸರಬರಾಜು ವ್ಯತ್ಯಯ ಮತ್ತು ಕೊರತೆ ಉಂಟಾಗಿದೆ ; ಕಾರಣಗಳೇನು ; (ವಿವರ ನೀಡುವುದು)

(ಈ) ಆಸ್ಪತ್ರೆಗಳಲ್ಲಿ ಔಷಧಗಳ ಕೊರತೆ ಒಂದೆಡೆಯಾದರೆ, ಕೇಂದ್ರದ ಅತ್ಯಂತ ಕಡಿಮೆ ದರದಲ್ಲಿ ಔಷಧ ಒದಗಿಸುವ ಪ್ರಧಾನಮಂತ್ರಿ ಜನಔಷಧ ಕೇಂದ್ರಗಳನ್ನು ಮುಚ್ಚಲು ಹೊರಟಿರುವ ರಾಜ್ಯ ಸರ್ಕಾರದ ಕ್ರಮ ಸರಿಯೇ ;

(ಉ) ಉಗ್ರಾಣಗಳಲ್ಲಿ ಹಾಗೂ ತಾಲ್ಲೂಕು ಜಿಲ್ಲಾ ಆಸ್ಪತ್ರೆಗಳಲ್ಲಿ ಅಗತ್ಯ ಜೀವರಕ್ಷಕ ಔಷಧಿಗಳನ್ನು ಸಂಗ್ರಹಿಸಿಡಲು ಮತ್ತು ಮುಂದಿನ ದಿನಗಳಲ್ಲಿ ಔಷಧಿ ಕೊರತೆ ಉಂಟಾಗದಂತೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ; (ವಿವರ ಒದಗಿಸುವುದು)

(ಊ) ಔಷಧಗಳ ಅಲಭ್ಯತೆಯಿಂದಾಗಿ ಬಡರೋಗಿಗಳು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಜನರು ತಮ್ಮದಲ್ಲದ ತಪ್ಪಿಗೆ ವಿನಾಕಾರಣ ಶಿಕ್ಷೆ ಅನುಭವಿಸುವಂತಾಗಿದ್ದು, ಇದನ್ನು ತಡೆಯಲು ಸರ್ಕಾರ ಸಕಾಲದಲ್ಲಿ ಸೂಕ್ತ ಹಾಗೂ ಅಗತ್ಯ ಕ್ರಮ ವಹಿಸದೇ ಇರಲು ಕಾರಣಗಳೇನು ?

## ಅರಣ್ಯ ವಾಸಿಗಳ ಪುನರ್ವಸತಿ ಕೇಂದ್ರಗಳ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) –**

೭೫ (೫೭೯) ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೪೦ ವರ್ಷ (೧೯೮೫) ಗಳಿಂದ ರಾಜ್ಯದ ಉತ್ತರ ಕನ್ನಡ, ಚಿಕ್ಕಮಗಳೂರು, ಶಿವಮೊಗ್ಗ, ಉಡುಪಿ, ಕೊಡಗು, ಮೈಸೂರು, ಚಾಮರಾಜನಗರ, ರಾಮನಗರ ಮತ್ತು ಬೆಳಗಾವಿ ಜಿಲ್ಲೆಗಳ ಅರಣ್ಯ ಪ್ರದೇಶದಲ್ಲಿ ಸಾಗುವಳಿ ಮಾಡಿಕೊಂಡು ವಾಸಿಸುತ್ತಿದ್ದ ಬುಡಕಟ್ಟು ಜನರ ಕುಟುಂಬಗಳನ್ನು ಸರ್ಕಾರ ಅರಣ್ಯ ಇಲಾಖೆಯ ಬೇರೆ ಬೇರೆ ಬೃಹತ್ ಯೋಜನೆಗಳ ಕಾರಣಕ್ಕಾಗಿ ಒಕ್ಕಲೆಬ್ಬಿಸುವ ಕಾರ್ಯ ನಡೆಸುತ್ತಿರುವುದು ನಿಜವೇ ; ಯಾವ ಯಾವ ಜಿಲ್ಲೆಗಳಲ್ಲಿ ಎಷ್ಟು ಬುಡಕಟ್ಟು ಕುಟುಂಬಗಳನ್ನು ಒಕ್ಕಲೆಬ್ಬಿಸಲಾಗಿದೆ ; (ಮಾಹಿತಿ ನೀಡುವುದು)

(ಆ) ಅವುಗಳಲ್ಲಿ ಪೂರ್ಣ ಪ್ರಮಾಣದ ಪುನರ್ವಸತಿ ವ್ಯವಸ್ಥೆ ಮಾಡಿದ ಬುಡಕಟ್ಟು ಕುಟುಂಬಗಳ ಸಂಖ್ಯೆ ಎಷ್ಟು ;

(ಇ) ಪುನರ್ವಸತಿ ಪೂರ್ಣಗೊಳಿಸಲು ಬಾಕಿ ಇರುವ ಬುಡಕಟ್ಟು ಕುಟುಂಬಗಳ ಸಂಖ್ಯೆ ಎಷ್ಟು ;

(ಈ) ಅವುಗಳನ್ನು ಯಾವ ಕಾಲಮಿತಿ ಒಳಗೆ ಪೂರ್ಣಗೊಳಿಸಲಾಗುವುದು ? (ಮಾಹಿತಿ ನೀಡುವುದು)

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು, ಕಾಸೂ – 743 ಪ್ರತಿಗಳು (ಪಿ6)